# ವಿಧಾನಸಭಾಧ್ಯಕ್ಷರು, ಸಭಾಪತಿಗಳಿಗೆ ಓಂ ಬಿರ್ಲಾ ಸಲಹೆ

## ಲೋಕಸಭೆ ಸ್ಪೀಕರ್ ಭಾಷಣ ಸಾಂವಿಧಾನಿಕ

ಲಕ್ನೋದ ವಿಧಾನಸಭೆಯಲ್ಲಿ ನಾನು ಭಾಗಿಯಾಗಿದ್ದೆ. ರಾಜಸ್ಥಾನ ವಿಧಾನಸಭೆಯಲ್ಲೂ ಸ್ಪೀಕರ್ ಭಾಷಣ ಆಗಿದೆ. ಬೇರೆ ರಾಜ್ಯಗಳ ವಿಧಾನಸಭೆಯಲ್ಲೂ ಭಾಷಣ ಮಾಡಿದ್ದಾರೆ. ಲೋಕಸಭೆ ಸ್ಪೀಕರ್ ಕೂಡ ಮಾತನಾಡಿದ್ದಾರೆ. ಲೋಕಸಭೆ ಸ್ಪೀಕರ್ ಇನ್ನೊಂದು ರಾಜ್ಯದ ವಿಧಾನಸಭೆಯಲ್ಲಿ ಮಾತನಾಡಿದ್ದು ಇದೇ ಮೊದಲೇನಲ್ಲ. ಭಾಗವಹಿಸಿದ್ದು ತಪ್ಪು ಎನ್ನುವವರಿಗೆ ಇದು ಅರ್ಥವಾಗಿಲ್ಲ. ಸಂವಿಧಾನ ಉಲ್ಲಂಘನೆಯಾಗಿಲ್ಲ. ಇದನ್ನು ವಿರೋಧಿಸುವವರು ತಿಳಿದುಕೊಳ್ಳಬೇಕು ಎಂದು ಸ್ಪೀಕರ್ ಕಾಗೇರಿ ಸ್ಪಷ್ಟಪಡಿಸಿ ಕಾಂಗ್ರೆಸ್ ನಾಯಕರಿಗೆ ತಿರುಗೇಟು ನೀಡಿದರು.

ಬೆಂಗಳೂರು,ಸೆ.25:-

ಸದನದ ಪೀಠದಲ್ಲಿರುವವರು ನಿಷ್ಪಕ್ಷಪಾತವಾಗಿ ವರ್ತಿಸಬೇಕು, ಪಕ್ಷದ ಹೊರತಾಗಿ ಕಾರ್ಯನಿರ್ವಹಿಸಬೇಕು, ಪೀಠದ ನಿಯಮಕ್ಕೆ ಅನುಗುಣವಾಗಿ ನಡೆದುಕೊಳ್ಳಬೇಕು, ಪಕ್ಷದ ಹೊರತಾಗಿ ನಿರ್ಣಯಗಳನ್ನು ತೆಗೆದುಕೊಳ್ಳಬೇಕೆಂದು ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ವಿಧಾನಸಭಾಧ್ಯಕ್ಷರು ಹಾಗೂ ಸಭಾಪತಿಗಳಿಗೆ ಸಲಹೆ ನೀಡಿದ್ದಾರೆ.

ವಿಧಾನಸೌಧದಲ್ಲಿ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮದು ಪ್ರಭುತ್ವ ವ್ಯವಸ್ಥೆಯ ದೇಶವಾಗಿರುವುದರಿಂದ ಪ್ರಜಾಪ್ರಭುತ್ವ ಬಲಪಡಿಸುವಲ್ಲಿ ಪ್ರತಿನಿಧಿಗಳ ಪಾತ್ರ ಬಹುಮುಖ್ಯ. ಜನರ ಪ್ರತಿನಿಧಿಗಳು ಪಾರದರ್ಶಕವಾಗಿರಬೇಕು. ಜನತೆಯ ಆಸೆ, ಆಕಾಂಕ್ಷೆಗಳ ಪರ ಕೆಲಸ ಮಾಡಬೇಕು. ಪಂಚಾಯಿತಿಯಿಂದ ಸಂಸತ್‌ವರೆಗೆ ಜನರ ಧ್ವನಿ ಕೇಳಬೇಕು. ಜನತೆಯ ಸಮಸ್ಯೆಗಳ ಬಗ್ಗೆ ಅರಿವಿದ್ದಾಗ ಮಾತ್ರ ಈ ಪ್ರಜಾಪ್ರಭುತ್ವಕ್ಕೆ ಬೆಲೆ ಸಿಗಲಿದೆ ಎಂದರು.

ಸಾರ್ವಜನಿಕಲೆಕ್ಕಪತ್ರ ಸಮಿತಿಗೆ100 ವರ್ಷ ತುಂಬಿದ ಹಿನ್ನೆಲೆಯಲ್ಲಿ ಡಿಸೆಂಬರ್ 4-5ರಂದು ದೆಹಲಿಯಲ್ಲಿ ಶತಮಾನೋತ್ಸವ ಆಚರಣೆ, ಯುವ ಪ್ರತಿನಿಧಿಗಳಿಗೆ ತರಬೇತಿ ನೀಡಲಾಗುವುದು. ಮಹಿಳಾ ದಿನಾಚರಣೆ ಪ್ರಯುಕ್ತ ವಿಶಿಷ್ಟ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ. ಇದಕ್ಕೆ ಮಹಿಳಾ ಜನಪ್ರತಿನಿಧಿಗಳಿಗೆ ಆಹ್ವಾನವಿದೆ. ಸ್ವಾತಂತ್ರ್ಯ ಬಂದು 75 ವರ್ಷಗಳನ್ನು ಪೂರೈಸಿದ್ದೇವೆ. ಹೀಗಾಗಿ ಈ ವಿಶಿಷ್ಟಕಾರ್ಯಕ್ರಮ ನಡೆಸುತ್ತಿರುವುದಾಗಿ ಇದೇ ಸಂದರ್ಭದಲ್ಲಿ ತಿಳಿಸಿದರು.

ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ವಿರೋಧ ವಿಚಾರವಾಗಿ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಓಂಬಿರ್ಲಾ, ಕಾನೂನು ಮಾಡುವುದು ಸರ್ಕಾರ. ಚರ್ಚೆಗಳ ನಂತರವೇ ಕಾನೂನು ತರಲಾಗುತ್ತದೆ. ಎಲ್ಲರ ಅಭಿಪ್ರಾಯ ಸಂಗ್ರಹಿಸಿಯೇ ವಿಧೇಯಕ ತರಲಾಗುತ್ತದೆ. ಸರ್ಕಾರ ವಿಧೇಯಕ ತರುತ್ತದೆ. ಬಿಎಸಿ ಸಭೆಯಲ್ಲೂ ಚರ್ಚೆಯಾಗಿರುತ್ತದೆ. ಕರ್ನಾಟಕದಲ್ಲಿ ಈ ನೀತಿ ಜಾರಿಯಾಗುತ್ತಿದೆ. ಕೆಲವರು ಗೊಂದಲಗಳನ್ನು ಸೃಷ್ಟಿಸಿ ಸಮಸ್ಯೆ ಎತ್ತಿರಬಹುದು. ವಿಧೇಯಕ ಜಾರಿ ವೇಳೆ ಇದು ಸಾಮಾನ್ಯ. ಸಾಧಕ ಬಾಧಕಗಳನ್ನ ನೋಡಿಯೇ ಸರ್ಕಾರ ನಿರ್ಧರಿಸುತ್ತದೆ ಎಂದು ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಸ್ಪಷ್ಟಪಡಿಸಿದರು.

# ಸದೃಢ ಪ್ರಜಾಪ್ರಭುತ್ವಕ್ಕಾಗಿ ಜನರ ನಂಬಿಕೆ ಉಳಿಸಿಕೊಳ್ಳುವುದು ಮುಖ್ಯ

## ಲೋಕಸಭಾ ಸ್ಪೀಕರ್ ಓಂ ಬಿರ್ಲಾ

ಬೆಂಗಳೂರು, ಸೆ.24: ಸದೃಢ ಪ್ರಜಾಪ್ರಭುತ್ವಕ್ಕಾಗಿ ವ್ಯವಸ್ಥೆಯಲ್ಲಿ ಜನರ ನಂಬಿಕೆಯನ್ನು ಉಳಿಸಿಕೊಳ್ಳುವುದು ಬಹಳ ಮುಖ್ಯ. ಜನಪ್ರತಿನಿಧಿಗಳು ತಮ್ಮ ನಡವಳಿಕೆಯ ಮೂಲಕ ತಮ್ಮನ್ನು ತಾವು ಪ್ರಾಮಾಣಿಕರೆಂದು ಪ್ರಸ್ತುತಪಡಿಸಿಕೊಂಡಾಗ ಮಾತ್ರ ಇದನ್ನು ಸಾಧಿಸಬಹುದು. ಇದು ಪ್ರಜಾಪ್ರಭುತ್ವದಲ್ಲಿ ಜನರ ವಿಶ್ವಾಸವನ್ನು ಗಳಿಸಲು ನೆರವಾಗುತ್ತದೆ ಎಂದು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅಭಿಪ್ರಾಯಪಟ್ಟಿದ್ದಾರೆ.

ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ 'ಪ್ರಜಾಪ್ರಭುತ್ವ ಸಂಸದೀಯ ಮೌಲ್ಯಗಳ ರಕ್ಷಣೆ' ಕುರಿತು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ವಿಧಾನಸೌಧದಲ್ಲಿನ ವಿಧಾನಸಭೆಯಲ್ಲಿ ಅವರು ಭಾಷಣ ಮಾಡಿದರು.

ಇಂದು ಭಾರತವು ಪರಿವರ್ತನೆಯ ಹಂತವನ್ನು ಎದುರಿಸುತ್ತಿದೆ. 'ಆಝಾದಿ ಕಾ ಅಮೃತ್ ಮಹೋತ್ಸವ'ದ ಸಮಯದಲ್ಲಿ ಈ ದೇಶದ ಪ್ರತಿಯೊಂದು ವರ್ಗದ ಜನ ಸಮುದಾಯವೂ ನವ ಭಾರತ ನಿರ್ಮಾಣದಲ್ಲಿ ಭಾಗವಹಿಸಲು ಬಯಸುತ್ತದೆ. ಶಾಸಕಾಂಗಗಳನ್ನು ಮತ್ತು ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಬಲಪಡಿಸುವುದು ನಮ್ಮ ಸಂಕಲ್ಪವಾಗಿದೆ. ಅರ್ಥಪೂರ್ಣ ಚರ್ಚೆಗಳು ಮತ್ತು ಸಂವಾದಗಳ ಮೂಲಕ ನಾವು ಜನರ ಆಶಯಗಳನ್ನು ಮತ್ತು ನಿರೀಕ್ಷೆಗಳನ್ನು ಪೂರೈಸಬೇಕು. ಇದರಿಂದ ನಾವು ಪ್ರಜಾಪ್ರಭುತ್ವದ ಮುಂಚೂಣಿಯಲ್ಲಿರುವುದನ್ನು ಕುರಿತು ಜಗತ್ತಿಗೆ ಮಾರ್ಗದರ್ಶನ ನೀಡಬಹುದು ಎಂದು ಅವರು ತಿಳಿಸಿದರು.

ದೇಶದಲ್ಲಿ 17 ಸಾರ್ವತ್ರಿಕ ಚುನಾವಣೆಗಳು ಮತ್ತು 300ಕ್ಕೂ ಹೆಚ್ಚು ವಿಧಾನಸಭಾ ಚುನಾವಣೆಗಳು ಯಶಸ್ವಿಯಾಗಿ ನಡೆದಿವೆ. ಮತದಾರರ ಭಾಗವಹಿಸುವಿಕೆಯಲ್ಲಿ ಗಣನೀಯ ಪ್ರಗತಿಯಾಗಿದೆ. ಚುನಾವಣೆ ನಂತರ ಅಧಿಕಾರದ ವರ್ಗಾವಣೆ ಅತ್ಯಂತ ಸರಳವಾಗಿ ನಡೆಯುತ್ತಿದೆ. ಇದಕ್ಕೆ ಕಾರಣ ಪ್ರಜಾಪ್ರಭುತ್ವದ ಬಗೆಗಿನ ನಮ್ಮ ಬದ್ಧತೆಯಾಗಿದೆ. ಸ್ವಾತಂತ್ರ್ಯದ 75 ವರ್ಷಗಳನ್ನು ಪೂರ್ಣಗೊಳಿಸಿರುವಾಗ ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಜನರಿಗೆ ಇನ್ನಷ್ಟು ಉತ್ತರದಾಯಿಯನ್ನಾಗಿ ಮಾಡುವುದು ಹೇಗೆ ಎಂದು ನಾವು ಪರಿಶೀಲಿಸಬೇಕಾಗಿದೆ ಎಂದು ಅವರು ಕರೆ ನೀಡಿದರು.

ಶಾಸಕಾಂಗ ಸಂಸ್ಥೆಗಳು ಇತ್ತೀಚಿನ ದಿನಗಳಲ್ಲಿ ಜನರ ಕುಂದುಕೊರತೆಗಳಿಗೆ ಧ್ವನಿ ನೀಡಲು ವಿವಿಧ ದೃಷ್ಟಿಕೋನಗಳಲ್ಲಿ ಕೆಲಸ ಮಾಡುತ್ತಿವೆ. ಕಾರ್ಯಾಂಗದ ಜವಾಬ್ದಾರಿಯನ್ನು ಸರಿಪಡಿಸಲು ಬಹುವಿಧದ ಆಯಾಮದಲ್ಲಿ ಕೆಲಸ ಮಾಡುತ್ತಿವೆ. ಇಂತಹ ಗುರುತರವಾದ ಜವಾಬ್ದಾರಿಗಳನ್ನು ಪೂರೈಸಲು, ಶಾಸಕಾಂಗದ ಸದಸ್ಯರು ಪ್ರಜಾಪ್ರಭುತ್ವದ ತತ್ವಗಳು ಮತ್ತು ಮೌಲ್ಯಗಳನ್ನು ಶ್ರದ್ಧೆಯಿಂದ ಪಾಲಿಸಬೇಕು ಮತ್ತು ಈ ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಜನರಿಗೆ ಹೆಚ್ಚು ಪಾರದರ್ಶಕ ಮತ್ತು ಉತ್ತರದಾಯಕವಾಗಿ ಮಾಡುವಂತೆ ನೋಡಿಕೊಳ್ಳಬೇಕೆಂದು ಲೋಕಸಭಾ ಸ್ಪೀಕರ್ ತಿಳಿಸಿದರು.

ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡ, ಬಸವಣ್ಣ 12ನೇ ಶತಮಾನದಲ್ಲಿ ನಿರ್ಮಿಸಿದ 'ಅನುಭವ ಮಂಟಪ' ಪ್ರಸ್ತುತ ಸಂದರ್ಭದಲ್ಲಿ ಜನಪ್ರತಿನಿಧಿಗಳ ಸಂಸತ್ತಿನ ಪ್ರತಿಬಿಂಬವಾಗಿದೆ. ಸ್ವಾತಂತ್ರ್ಯ ಹೋರಾಟದಲ್ಲಿ ಕಿತ್ತೂರು ರಾಣಿ ಚನ್ನಮ್ಮನ ಮಹಾನ್ ತ್ಯಾಗವು ನಮಗೆ ಸ್ಫೂರ್ತಿ ನೀಡುತ್ತಲೇ ಇದೆ ಎಂದು ಅವರು ಹೇಳಿದರು.

ಕರ್ನಾಟಕ ವಿಧಾನಸಭೆ ಮತ್ತು ವಿಧಾನಪರಿಷತ್‌ನ ಜಂಟಿ ಸಭೆಯಲ್ಲಿ ಭಾಗವಹಿಸುತ್ತಿರುವುದಕ್ಕೆ ನನಗೆ ತುಂಬಾ ಸಂತೋಷವಾಗಿದೆ. ಇಲ್ಲಿನ ವಿಧಾನಸೌಧ ಕಟ್ಟಡವು ಪ್ರಜಾಪ್ರಭುತ್ವದ ಒಂದು ವಿಶಿಷ್ಟ ಸಂಕೇತವಾಗಿದ್ದು, ಅದು ಜನರ ಆಶಯಗಳು ಮತ್ತು ಆಕಾಂಕ್ಷೆಗಳನ್ನು ಪ್ರತಿಬಿಂಬಿಸುತ್ತದೆ. ಈ ಐತಿಹಾಸಿಕ ಕಟ್ಟಡ ಮತ್ತು ಪ್ರಜಾಪ್ರಭುತ್ವದೊಂದಿಗಿನ ಅದರ ಸುದೀರ್ಘ ಪ್ರಯಾಣವು ನಮಗೆ ಹೊಸ ಸ್ಫೂರ್ತಿಯನ್ನು ನೀಡುತ್ತದೆ ಎಂದು ಓಂ ಬಿರ್ಲಾ ಹೇಳಿದರು.



### ಮೊದಲ ಬಾರಿಗೆ ಭಾಷಣ

ರಾಷ್ಟ್ರಪತಿ ಹಾಗೂ ರಾಜ್ಯಪಾಲರನ್ನು ಹೊರತುಪಡಿಸಿ ರಾಜ್ಯ ವಿಧಾನಸಭೆಯ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಲೋಕಸಭೆಯ ಸ್ಪೀಕರ್ ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಭಾಷಣ ಮಾಡಿದರು..

### ಕಾನೂನುಗಳ ಸಮಗ್ರ ಚರ್ಚೆ ಅಗತ್ಯ

ನಾವು ರೂಪಿಸುವ ಕಾನೂನುಗಳ ಬಗ್ಗೆ ಸಮಗ್ರ ಚರ್ಚೆ ಮತ್ತು ಚಿಂತನ ಮಂಥನ ನಡೆಸಬೇಕಾದುದು ನಮ್ಮ ಜವಾಬ್ದಾರಿಯಾಗಿದೆ. ಈ ಪ್ರಕ್ರಿಯೆಯಲ್ಲಿ ಶಾಸಕರ ಸಕ್ರಿಯ ಭಾಗವಹಿಸುವಿಕೆ ಇರಬೇಕು. ಅಂತಿಮವಾಗಿ ಕಾನೂನು ರೂಪುಗೊಂಡ ಮೇಲೆ ಯಾರೂ ಇದರ ಬಗ್ಗೆ ಬೆರಳೆತ್ತಿ ನಮ್ಮತ್ತ ತೋರುವಂತಿರಬಾರದು. ಶಾಸಕರ ಸಾಮರ್ಥ್ಯ ಮತ್ತು ಕೌಶಲ್ಯವನ್ನು ಹೆಚ್ಚಿಸಲು ಶಾಸಕಾಂಗಗಳು ಸಮಗ್ರ ಸಾಮರ್ಥ್ಯ ವೃದ್ಧಿ ಕ್ರಿಯಾ ಯೋಜನೆಯನ್ನು ರೂಪಿಸಬೇಕು ಎಂದು ಓಂ ಬಿರ್ಲಾ ತಿಳಿಸಿದರು.

### ಹಿಂದಿಯಲ್ಲಿ ಭಾಷಣ: ಪ್ರತಿಭಟನೆ

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ವಿಧಾನಮಂಡಲದ ಉಭಯ ಸದನಗಳನ್ನುದ್ದೇಶಿಸಿ ಹಿಂದಿಯಲ್ಲಿ ಭಾಷಣ ಆರಂಭಿಸುತ್ತಿದ್ದಂತೆ ಕನ್ನಡದ ಬಾವುಟ ಪ್ರದರ್ಶಿಸಿ, ಜೆಡಿಎಸ್ ಶಾಸಕ ಡಾ.ಕೆ.ಅನ್ನದಾನಿ ಪ್ರತಿಭಟಿಸಿದರು. ಕನ್ನಡದ ನೆಲದಲ್ಲಿ ಕನ್ನಡವೇ ಸಾರ್ವಭೌಮ, ಕನ್ನಡದಲ್ಲಿ ಭಾಷಣ ಮಾಡಬೇಕು ಎಂದು ಕೂಗಿದರು.

### ಮನವಿ

ನೂತನ ಸಂಸತ್ ಭವನ(ಸೆಂಟ್ರಲ್ ವಿಸ್ಟಾ)ದ ಸಂಕೀರ್ಣದಲ್ಲಿನ ಯಾವುದಾದರೂ ಒಂದು ಕಟ್ಟಡಕ್ಕೆ ಅನುಭವ ಮಂಟಪ ಎಂದು ನಾಮಕರಣ ಮಾಡುವಂತೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಮನವಿ ಪತ್ರ ಸಲ್ಲಿಸಿದರು.

# ವಿಧಾನಮಂಡಲವನ್ನು ಜನರ ಕಲ್ಯಾಣಕ್ಕಾಗಿ ಸಕಾರಾತ್ಮಕ ಚರ್ಚೆಗೆ ಮೀಸಲಿಡಿ: ಲೋಕಸಭಾ ಸ್ಪೀಕರ್ ಓಂ ಬಿರ್ಲಾ

ಸಂವಾದಗಳು ಕಾನೂನುಗಳು ರೂಪಿಸುವಾಗ ಸದನದಲ್ಲಿ ಆಗದೇ ಇರುವುದು ಬೇಸರದ ಸಂಗತಿ. ಹೀಗಾಗಿ ಶಾಸಕರ ಪಾತ್ರ ಸದನದಲ್ಲಿ ಅವರ ಸಹಭಾಗಿತ್ವ ಚರ್ಚೆ ಬಹಳ ಅಗತ್ಯವಾಗಿದೆ ಎಂದರು.

ಇದನ್ನೂ ಓದಿ: ಬಿಎಸ್ ಯಡಿಯೂರಪ್ಪಗೆ ಅತ್ಯುತ್ತಮ ಶಾಸಕ ಪ್ರಶಸ್ತಿ ನೀಡಿ ಗೌರವಿಸಿದ ಲೋಕಸಭಾ ಸ್ಪೀಕರ್ ಓಂ ಬಿರ್ಲಾ

ವಿಧಾನಸೌಧ ನಿರ್ಮಾತೃ ಮಾಜಿ ಮುಖ್ಯಮಂತ್ರಿ ಕೆಂಗಲ್ ಹನುಮಂತಯ್ಯನವರನ್ನು ಹಾಗೂ ಬೆಂಗಳೂರು ನಿರ್ಮಾತೃ ಕೆಂಪೇಗೌಡರನ್ನು ಸ್ಮರಿಸಿ ಮಾತನಾಡಿದ ಓಂ ಬಿರ್ಲಾ ದೇಶದ ವಿವಿಧ ಭಾಗಗಳಿಂದ ಬೆಂಗಳೂರಿಗೆ ಬರುವ ಜನ ಸಾಮಾನ್ಯವಾಗಿ ವಿಧಾನಸೌಧಕ್ಕೆ ಭೇಟಿ ನೀಡಿ ಇದರಿಂದ ಪ್ರೇರಿತಗೊಳ್ಳುತ್ತಾರೆ. ಕರ್ನಾಟಕ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಸದಸ್ಯರನ್ನು ಭೇಟಿಯಾಗಿ ಬಹಳ ಸಂತಸವಾಗುತ್ತದೆ.



ಪ್ರಜಾಪ್ರಭುತ್ವದಲ್ಲಿ ಸ್ವತಂತ್ರದ ಹಿಂದಿನ ಹೋರಾಟ ಸಂಸದೀಯ ಆಡಳಿತ ನಡೆಸುತ್ತಿದ್ದೇವೆ. ಸಂಸದೀಯ ವ್ಯವಸ್ಥೆ ಪ್ರಜಾಪ್ರಭುತ್ವ ವ್ಯವಸ್ಥೆ ಎಲ್ಲಿಗೆ ಬಂದಿದೆ. ನಡೆದು ಬಂದ ದಾರಿ ಏನು ಎಂಬುದರ ಅವಲೋಕನ ಇದಾಗಿದೆ. ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರೇ ಕೇಂದ್ರಬಿಂದುವಾಗಿದ್ದಾರೆ.

ಮತದಾರರು ಪ್ರತಿಚು ನಾವಣೆಯಲ್ಲಿ ಮತ ಹಾಕಿ ಜನಪ್ರತಿನಿಧಿಗಳನ್ನು ಆಯ್ಕೆ ಮಾಡುವುದು ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಗೆ ಸಾಕ್ಷಿಯಾಗಿದೆ. ದೇಶದ ಕಾಲಕಾಲಕ್ಕೆ ಸಂವಾದಗಳು ನಡೆದಿವೆ. ಪ್ರಧಾನಿಗಳು ಮುಖ್ಯಮಂತ್ರಿಗಳು ಮಂತ್ರಿಗಳು ವ್ಯಾಪಕ ಚರ್ಚೆ ನಡೆಸಿ ಅನುಭವಿ ರಾಜಕಾರಣಿ ಸಂಸದೀಯ ಪಟುಗಳು ಇದರ ಬಗ್ಗೆ ಚರ್ಚೆ ನಡೆಸಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಆಯ್ಕೆಗೊಂಡ ಶಾಸಕರು ಸದನದ ಗೌರವ ಹೆಚ್ಚಿಸುವಂತೆ ಹಾಗೂ ಸಾಮಾಜಿಕ ಬದುಕಿನಲ್ಲಿ ಕೂಡ ಗೌರವ ಹೆಚ್ಚಾಗುವಂತೆ ನೋಡಿಕೊಳ್ಳಬೇಕು.

ಸಂಸದೀಯ ಪ್ರಜಾಪ್ರಭುತ್ವ

ಕೇವಲ ರಾಜಕೀಯ ಕೆಸರೆರಚಾಟ ನಡೆಯುತ್ತಿರುವುದು ಬೇಸರದ ಸಂಗತಿ.

ಪ್ರಜಾಪ್ರಭುತ್ವ ವ್ಯವಸ್ಥೆ ಮೇಲೆ ಪ್ರಶ್ನೆಗಳು ಎದ್ದಿವೆ.ನಮ್ಮ ನಮ್ಮ ಸದನಗಳಲ್ಲಿ ವ್ಯಾಪಕ ಚರ್ಚೆ ಉತ್ತಮ ಕಾನೂನು ರೂಪಿತವಾಗ ಬೇಕು. ಶಾಸಕರು ತಪ್ಪದೇ ಸದನದಲ್ಲಿ ಹಾಜರಾಗಬೇಕಿದೆ. ಅಮೃತ ಮಹೋತ್ಸವದ ಈ ಸಂದರ್ಭದಲ್ಲಿ ಸಂಸದೀಯ ವ್ಯವಸ್ಥೆಯನ್ನು ಬಲಿಷ್ಠಗೊಳಿಸುತ್ತೇವೆಂರೋ ವ್ಯಾಪಕ ಚರ್ಚೆ ನಡೆಸುತ್ತೇವೋ ಅಷ್ಟು ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆ ಬಲಿಷ್ಠಗೊಳ್ಳುತ್ತದೆ. ದೇಶದ ಜನರ ಸಾಮೂಹಿಕ ಕಲ್ಯಾಣವಾಗಬೇಕು. ಹೀಗಾಗಿ ಸಾಮೂಹಿಕ ಕಲ್ಯಾಣಕ್ಕಾಗಿ ಒತ್ತು ನೀಡಬೇಕು.

ಪಂಚಾಯತಿ, ನಗರಸಭೆ, ವಿಧಾನಸಭೆ ಯಾವುದೇ ಸಂಸತ್ ಇರಲಿ ಎಲ್ಲಾ ಸದನಗಳಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಬಲಿಷ್ಠಗೊಳ್ಳಬೇಕು. ಸಂಸದೀಯ ವ್ಯವಸ್ಥೆ ರಾಜವ್ಯವಸ್ಥೆಯ ಮೂಲವಾಗಿದೆ. ಹೀಗಾಗಿ

# ವಿಧಾನಮಂಡಲವನ್ನು ಜನರ ಕಲ್ಯಾಣಕ್ಕಾಗಿ ಸಕಾರಾತ್ಮಕ ಚರ್ಚೆಗೆ ಮೀಸಲಿಡಿ: ಲೋಕಸಭಾ ಸ್ಪೀಕರ್ ಓಂ ಬಿರ್ಲಾ

ಬೆಂಗಳೂರು: ವಿಧಾನಮಂಡಲವನ್ನು ಜನಹಿತಕ್ಕಾಗಿ ಸಕಾರಾತ್ಮಕವಾಗಿ ಚರ್ಚೆಗಾಗಿ ಮೀಸಲಿಟ್ಟಾಗ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೆಚ್ಚು ಬಲಶಾಲಿಯನ್ನಾಗಿಸಬಹುದಾಗಿದೆ ಎಂದು ಲೋಕಸಭಾಧ್ಯಕ್ಷರಾದ ಓಂ ಬಿರ್ಲಾ ಅಭಿಪ್ರಾಯಪಟ್ಟರು.



ಭಾರತ ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವದ ಅಂಗವಾಗಿ 'ಪ್ರಜಾಪ್ರಭುತ್ವ: ಸಂಸದೀಯ ಮೌಲ್ಯಗಳ ರಕ್ಷಣೆ' ಕುರಿತು ಇದೇ ಮೊದಲ ಬಾರಿಗೆ ಕರ್ನಾಟಕ ವಿಧಾನಮಂಡಲ ಜಂಟಿ ಅಧಿವೇಶನವನ್ನುದ್ದೇಶಿಸಿ ಅವರು ಮಾತನಾಡಿದರು. ನಾವು ವಿಧಾನಮಂಡಲವನ್ನು ಜನಹಿತಕ್ಕಾಗಿ ಸಕಾರಾತ್ಮಕವಾಗಿ ಚರ್ಚೆಗಾಗಿ ಮೀಸಲಿಟ್ಟಾಗ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೆಚ್ಚು ಬಲಶಾಲಿಯನ್ನಾಗಿಸಬಹುದಾಗಿದೆ. ಇದಕ್ಕಾಗಿ ಸದನದ ಸದಸ್ಯರು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಪಾರದರ್ಶಕಗೊಳಿಸಬೇಕು. ಶಾಸಕಾಂಗ ಕಾರ್ಯಾಂಗ ನ್ಯಾಯಾಂಗಗಳಲ್ಲಿ ಶಾಸಕರ ಅಧಿಕಾರ ಜವಾಬ್ದಾರಿ ಹೆಚ್ಚಾಗಿರುತ್ತದೆ. ಶಾಸಕರು ನೀತಿವಂತರು ಸತ್ಯವಂತರು ಆಗಬೇಕೆಂಬ ಆಸೆಯಿಂದ ಶಾಸಕಾಂಗವನ್ನು ರೂಪಿಸಲಾಯಿತು. ಶಾಸಕರ ದಕ್ಷತೆ ಕ್ಷಮತೆಯನ್ನು ಹೆಚ್ಚಿಸಲು ವಿಧಾನಮಂಡಲ ಅಧಿವೇಶನ ಪ್ರಮುಖ ಪಾತ್ರವಹಿಸುತ್ತದೆ.ವ್ಯಾಪಕ ಚರ್ಚೆ 3.ನೇ

ಸಂತಸವಾಗುತ್ತದೆ.

ಕರ್ನಾಟಕದ ವಿಧಾನಸಭೆ ಪ್ರಜಾಪ್ರಭುತ್ವದ ಪ್ರತೀಕವಾಗಿದೆ. ಜನರ ಆಶೆಗಳನ್ನು ಪ್ರತಿನಿಧಿಸುವ ಐತಿಹಾಸಿಕ ಭವನ ಇದಾಗಿದೆ. ಕರ್ನಾಟಕ ಸಮೃದ್ಧ ಗೌರವಯುತ ವಿಧಾನಸಭೆ ಹೊಂದಿದೆ. ಬಸವೇಶ್ವರರ ಅನುಭವ ಮಂಟಪವೇ ಸಂಸತ್ತಾಗಿತ್ತು, ರಾಣಿ ಚೆನ್ನಮ್ಮ ಅವರ ತ್ಯಾಗ ಪ್ರೇರಣೀಯ. ಕರ್ನಾಟಕದ ಪ್ರಜಾಪ್ರಭುತ್ವದ ಯಾತ್ರೆಯನ್ನು ಸಮೃದ್ಧ ಗೊಳಿಸುವಲ್ಲಿ ಕಾರಣೀಭೂತರಾದ ವರಿಗೆ ಧನ್ಯವಾದಗಳನ್ನು ಸಲ್ಲಿಸುವುದಾಗಿ ಹೇಳಿದರು.

ವ್ಯವಸ್ಥೆಗೆ ಸಾಕ್ಷಿಯಾಗಿದೆ. ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯಿಂದ ಜನರ ಕಲ್ಯಾಣವನ್ನು ಕಾನೂನನ್ನು ಜಾರಿಗೊಳಿಸುತ್ತವೆ. 75 ವರ್ಷದ ಈ ಯಾತ್ರೆಯಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಶಾಸನಗಳು ಜನರ ಕಲ್ಯಾಣಕ್ಕಾಗಿ ಹೆಚ್ಚು ಪಾತ್ರವಹಿಸುತ್ತವೆ. ಹೀಗಾಗಿ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಜನರನ್ನು ಬಲಿಷ್ಠಗೊಳಿಸಬೇಕಿದೆ. ಜನರ ಆಶೆಗಳನ್ನು ವಿಧಾನಮಂಡಲ ಅಧಿವೇಶನದಿಂದ ಪೂರೈಸಬೇಕು ಎಂದರು.

ವಿಧಾನ ಮಂಡಲದೊಳಗೆ ಶಾಸಕರ ಹಿರಿಮೆ ಹೆಚ್ಚಲು

ಸಂಸದೀಯ ಪ್ರಜಾಪ್ರಭುತ್ವ ವ್ಯವಸ್ಥೆ ಬಲಿಷ್ಠಗೊಳ್ಳುವ ಪರಿಸರ ರೂಪಿತವಾಗಬೇಕು. ಈ ಹಿಂದೆ ಸದನಗಳನ್ನು ದೇವಸ್ಥಾನಗಳಂತೆ ಭಾವಿಸಲಾಗುತ್ತಿತ್ತು.

ಆದರೆ ಪ್ರಸಕ್ತ ದಿನಗಳಲ್ಲಿ ಸದನಗಳಲ್ಲಿ ನಡೆಯುತ್ತಿರುವ ಅಹಿತಕರ ವ್ಯವಸ್ಥೆ ರಾಜಕೀಯ ಕಚ್ಚಾಟ ಹೆಚ್ಚುತ್ತಿರುವುದು ಬೇಸರಕ್ಕೆ ಕಾರಣವಾಗಿದೆ. ಸ್ವಾತಂತ್ರ ಬಳಿಕ ಸದನದಲ್ಲಿ ವಾದ ವಿವಾದ, ಸಂವಾದ ಮತ ಬದಲಾವಣೆ ಸಂವಾದ ನಡೆಯಬೇಕೆಂಬ ಉದ್ದೇಶದಿಂದ ಕಾನೂನು ರೂಪಿಸಲಾಗಿತ್ತಾದರೂ ಇಂದಿನ ದಿನಗಳಲ್ಲಿ ಸಂವಾದ ನಡೆಯದೇ

ಮೂಲವಾಗಿದೆ. ಹೀಗಾಗಿ ಸಂಸದೀಯ ವ್ಯವಸ್ಥೆಯನ್ನು ಬಲಿಷ್ಠಗೊಳಿಸಬೇಕೆಂದು ಓಂ ಬಿರ್ಲಾ ಕರೆ ನೀಡಿದರು.

ಬಿ.ಎಸ್.ಯಡಿಯೂರಪ್ಪ ಅವರಿಗೆ ವಿಧಾನಸಭೆಯಲ್ಲಿ ಉತ್ತಮ ಶಾಸಕ ಪ್ರಶಸ್ತಿ ನೀಡುವ ಅವಕಾಶ ಸಿಕ್ಕಿರುವುದು ಪುಣ್ಯ. ಯಡಿಯೂರಪ್ಪ ರೈತರ ಸಾಲಮನ್ನಾ ಸೇರಿದಂತೆ ಅನೇಕ ಜನಪರ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದಾರೆ ಎಂದು ಯಡಿಯೂರಪ್ಪ ಅವರನ್ನ ಲೋಕಸಭಾ ಸ್ಪೀಕರ್ ಶ್ಲಾಘಿಸಿದರು.